ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 633 ಯುಎನ್‌ಇ 2015 (ಭಾಗ-1)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 05-03-2016.

**ಇಂದ:**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು - 560 001.

**ಇವರಿಗೆ:**
ಕುಲಸಚಿವರು,
ದಾವಣಗೆರೆ ವಿಶ್ವವಿದ್ಯಾಲಯ,
**ದಾವಣಗೆರೆ.**

ಮಾನ್ಯರೆ,

ವಿಷಯ:- 2015-16ನೇ ಶೈಕ್ಷಣಿಕ ಸಾಲಿಗೆ ಹರಿಹರ ತಾಲ್ಲೂಕಿನ ಮಲೇಬೆನ್ನೂರಿನಲ್ಲಿ ಹೊಸದಾಗಿ ಪ್ರಾರಂಭಿಸಲಿರುವ ಶ್ರೀ ಮಾಲತೇಶ ಬಿ.ಇಡಿ., ಕಾಲೇಜಿಗೆ ಸಂಯೋಜನೆ ನೀಡುವ ಬಗ್ಗೆ.

ಉಲ್ಲೇಖ:-
1. ಎನ್‌ಸಿಟಿಇಯ ಪ್ರಾದೇಶಿಕ ನಿರ್ದೇಶಕರ ಪತ್ರ ಸಂ.F.SRO/NCTE-SRC APP1940/B.Ed/ K.A/2015/62204, ದಿನಾಂಕ 03-03-2015.
2. ತಮ್ಮ ಪತ್ರ ಸಂ/ದಾವಿವಿ/ಸಿಡಿಸಿ/ಸಂ.ವ./05/2016-16/345, ದಿನಾಂಕ: 18-12-2015.
3. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಅವರ ಪತ್ರ ಸಂ. ಕಾಶಿಇ/ಶೈವಿ/70/ ಬಿ.ಇಡಿ/ 2013-14, ದಿನಾಂಕ: 10-02-2016.
4. ಮ್ಯಾನೇಜಿಂಗ್ ಟ್ರಸ್ಟಿ, ನೀವೀ ಎಜುಕೇಷನ್ ಟ್ರಸ್ಟ್, ಮಲ್ಲನಾಯಕನಹಳ್ಳಿ, ಮಲೇಬೆನ್ನೂರು ಇವರ ಪತ್ರ,

---

ಉಲ್ಲೇಖ (2) ಮತ್ತು (3)ರ ಪ್ರಸ್ತಾವನೆಯಂತೆ, ನೀವೀ ಎಜುಕೇಷನ್ ಟ್ರಸ್ಟ್, ಮಲ್ಲನಾಯಕನಹಳ್ಳಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ - 577 530 ಇವರು ಹೊಸದಾಗಿ ಪ್ರಾರಂಭಿಸಲಿರುವ ಶ್ರೀ ಮಾಲತೇಶ ಬಿ.ಇಡಿ., ಕಾಲೇಜು, ಮಲೇಬೆನ್ನೂರು, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ - 577 530, ಈ ಕಾಲೇಜಿಗೆ ದಾವಣಗೆರೆ ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣಾ ಸಮಿತಿಯ ವರದಿ ಮತ್ತು ವಿದ್ಯಾವಿಷಯಕ ಪರಿಷತ್‌ನ ಸಮಾಲೋಚನೆಯೊಂದಿಗೆ ಸಿಂಡಿಕೇಟ್ ಮಾಡಿರುವ ಶಿಫಾರಸ್ಸುಗಳು ಹಾಗೂ ಎನ್‌ಸಿಟಿಇಯು ನೀಡಿರುವ ಮಾನ್ಯತೆಯನ್ನು ಆಧರಿಸಿ, 2015-16ನೇ ಶೈಕ್ಷಣಿಕ ಸಾಲಿನಿಂದ ಸದರಿ ಕಾಲೇಜಿಗೆ ಸಂಯೋಜನೆ ಮಂಜೂರು ಮಾಡುವ ವಿಚಾರವನ್ನು ಆಧರಿಸಿ ಸಂವೀಕ್ಷಿಸಲಾಗಿದೆ.

2) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ (11)ನೇ ಉಪಪ್ರಕರಣದಡಿ ಹಾಗೂ ಸದರಿ ಅಧಿನಿಯಮದ ಪ್ರಕರಣ 59(18)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, **ನೀವೀ ಎಜುಕೇಷನ್ ಟ್ರಸ್ಟ್, ಮಲ್ಲನಾಯಕನಹಳ್ಳಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ - 577 530 ಇವರು ಶ್ರೀ ಮಾಲತೇಶ ಬಿ.ಇಡಿ., ಕಾಲೇಜು, ಮಲೇಬೆನ್ನೂರು, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ - 577 530 ಇಲ್ಲಿ** ಹೊಸದಾಗಿ 100(ಒಂದು ನೂರು) ವಿದ್ಯಾರ್ಥಿ ಪ್ರಮಾಣದೊಂದಿಗೆ ಬಿ.ಇಡಿ. ಮಹಾವಿದ್ಯಾಲಯವನ್ನು 2015-16ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಲು ಸಂಯೋಜನೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರು ಮಾಡುವಂತೆ ಸರ್ಕಾರದ ಶಿಫಾರಸ್ಸನ್ನು ತಿಳಿಸಲು ನಿರ್ದೇಶಿತನಾಗಿದ್ದೇನೆ.

**ಷರತ್ತುಗಳು:-**

| | |
|---|---|
| 1. | ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು ಹಾಗೂ ಈ ಕುರಿತು ವಿಶ್ವವಿದ್ಯಾಲಯಕ್ಕೆ ಒಪ್ಪಂದದ ಪತ್ರವನ್ನು ಸಲ್ಲಿಸತಕ್ಕದ್ದು. |
| 2. | ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು; |
| 3. | ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ; |
| 4. | ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು; |
| 5. | ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. |
| 6. | ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. |

Scanned with CamScanner

| | |
|---|---|
| 7. | ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ. |
| 8. | ದಿನಾಂಕ: 13–8–1997 ರಂದು ವಿಶಾಖ V/S ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು; |
| 9. | ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು. |
| 10. | ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ; |
| 11. | ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ. |
| 12. | ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ. |
| 13. | ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು; |
| 14. | ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು |
| 15. | ಶಾಶ್ವತ ಅನುದಾನರಹಿತ ಷರತ್ತಿ ಒಳಪಡಲು ಕಾಲೇಜಿನಿಂದ ಮಧ್ಯಂತರ ಒಪ್ಪಂದದ ಪತ್ರವನ್ನು ಮತ್ತು ಗೊತ್ತುವಳಿಯನ್ನು ವಿಶ್ವವಿದ್ಯಾಲಯವು ಪಡೆಯತಕ್ಕದ್ದು ಹಾಗೂ ವಿದ್ಯಾಸಂಸ್ಥೆಯು ಒಪ್ಪಂಧದಲ್ಲಿನ ನಿಬಂಧನೆಗಳನ್ನು ಕಟ್ಟು–ನಿಟ್ಟಾಗಿ ಪಾಲಿಸತಕ್ಕದ್ದು. |
| 16. | ದಾವಣಗೆರೆ ವಿಶ್ವವಿದ್ಯಾಲಯ ಹಾಗೂ ಎನ್‌ಸಿಟಿಇಯು ವಿಧಿಸುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. |
| 17. | ಸದರಿ ಮಹಾವಿದ್ಯಾಲಯದ ಕಟ್ಟಡ, ಶೌಚಾಲಯ ಮತ್ತು ಗ್ರಂಥಾಲಯ ವ್ಯವಸ್ಥೆಯನ್ನು ಉತ್ತಮಪಡಿಸಿಕೊಳ್ಳತಕ್ಕದ್ದು ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯ ನೇಮಕಾತಿ ಪ್ರಕ್ರಿಯೆಯನ್ನು ಆದಷ್ಟು ಬೇಗ ಪೂರ್ಣಗೊಳಿಸತಕ್ಕದ್ದು. |

ತಮ್ಮ ನಂಬುಗೆಯ,

(ಎನ್. ವೀರಬ್ರಹ್ಮಚಾರಿ) 1/3

ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು).

5/3/16.

ಪ್ರತಿ:–

1. ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು – 560 001.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಶಿವಮೊಗ್ಗ..
3. ಪ್ರಾದೇಶಿಕ ಜಂಟಿ ನಿರ್ದೇಶಕರು, ದಕ್ಷಿಣ ಪ್ರಾಂತೀಯ ಸಮಿತಿ, ನ್ಯಾಷನಲ್ ಕೌನ್ಸಿಲ್ ಫಾರ್ ಟೀಚರ್ಸ್ ಎಜುಕೇಷನ್, ಜ್ಞಾನ ಭಾರತಿ ಕ್ಯಾಂಪಸ್ ರಸ್ತೆ, ನಾಗರಬಾವಿ, ನ್ಯಾಷನಲ್ ಲಾ ಸ್ಕೂಲ್ ಎದುರು, ಬೆಂಗಳೂರು – 560 062.
4. ವಿಶೇಷಾಧಿಕಾರಿಗಳು, ಕೇಂದ್ರೀಕೃತ ದಾಖಲಾತಿ ಘಟಕ, ಕಾವೇರಿ ಭವನದ ಎದುರು, ಬೆಂಗಳೂರು – 09.
5. ಮ್ಯಾನೇಜಿಂಗ್ ಟ್ರಸ್ಟಿ, ನೀವೀ ಎಜುಕೇಷನ್ ಟ್ರಸ್ಟ್, ಮಲ್ಲನಾಯಕನಹಳ್ಳಿ, ಮಲೆಬೆನ್ನೂರು, ಹರಿಹರ ತಾಲ್ಲೂಕು. ದಾವಣಗೆರೆ ಜಿಲ್ಲೆ.
6. ಪ್ರಾಂಶುಪಾಲರು, ಶ್ರೀ ಮಾಲತೇಶ ಬಿ.ಇಡಿ ಕಾಲೇಜು, ಮಲೇಬೆನ್ನೂರು, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ.
7. ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

Scanned with CamScanner

ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 633 ಯುಎನ್ಇ 2015 (ಭಾಗ-1)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 05-03-2016.

**ಇಂದ:**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು - 560 001.

**ಇವರಿಗೆ:**
ಕುಲಸಚಿವರು,
ದಾವಣಗೆರೆ ವಿಶ್ವವಿದ್ಯಾಲಯ,
**ದಾವಣಗೆರೆ.**

ಮಾನ್ಯರೆ,

ವಿಷಯ:- 2015-16ನೇ ಶೈಕ್ಷಣಿಕ ಸಾಲಿಗೆ ಹರಿಹರ ತಾಲ್ಲೂಕಿನ ಮಲೆಬೆನ್ನೂರಿನಲ್ಲಿ ಹೊಸದಾಗಿ ಪ್ರಾರಂಭಿಸಲಿರುವ ಶ್ರೀ ಮಾಲತೇಶ ಬಿ.ಇಡಿ., ಕಾಲೇಜಿಗೆ ಸಂಯೋಜನೆ ನೀಡುವ ಬಗ್ಗೆ.

ಉಲ್ಲೇಖ:-
1. ಎನ್‌ಸಿಟಿಇಯ ಪ್ರಾದೇಶಿಕ ನಿರ್ದೇಶಕರ ಪತ್ರ ಸಂ.F.SRO/NCTE-SRC APP1940/B.Ed/ K.A/2015/62204, ದಿನಾಂಕ 03-03-2015.
2. ತಮ್ಮ ಪತ್ರ ಸಂ/ದಾವಿವಿ/ಸಿಡಿಸಿ/ಸಂ.ವ./05/2016-16/345, ದಿನಾಂಕ: 18-12-2015.
3. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಅವರ ಪತ್ರ ಸಂ. ಕಾಶಿಇ/ಶೈವಿ/70/ ಬಿ.ಇಡಿ/ 2013-14, ದಿನಾಂಕ: 10-02-2016.
4. ಮ್ಯಾನೇಜಿಂಗ್ ಟ್ರಸ್ಟಿ, ನೀವೀ ಎಜುಕೇಷನ್ ಟ್ರಸ್ಟ್, ಮಲ್ಲನಾಯಕನಹಳ್ಳಿ, ಮಲೆಬೆನ್ನೂರು ಇವರ ಪತ್ರ.

---

ಉಲ್ಲೇಖ (2) ಮತ್ತು (3)ರ ಪ್ರಸ್ತಾವನೆಯಂತೆ, ನೀವೀ ಎಜುಕೇಷನ್ ಟ್ರಸ್ಟ್, ಮಲ್ಲನಾಯಕನಹಳ್ಳಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ - 577 530 ಇವರು ಹೊಸದಾಗಿ ಪ್ರಾರಂಭಿಸಲಿರುವ ಶ್ರೀ ಮಾಲತೇಶ ಬಿ.ಇಡಿ., ಕಾಲೇಜು, ಮಲೇಬೆನ್ನೂರು, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ - 577 530, ಈ ಕಾಲೇಜಿಗೆ ದಾವಣಗೆರೆ ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣಾ ಸಮಿತಿಯ ವರದಿ ಮತ್ತು ವಿದ್ಯಾವಿಷಯಕ ಪರಿಷತ್‌ನ ಸಮಾಲೋಚನೆಯೊಂದಿಗೆ ಸಿಂಡಿಕೇಟ್ ಮಾಡಿರುವ ಶಿಫಾರಸ್ಸುಗಳು ಹಾಗೂ ಎನ್‌ಸಿಟಿಇಯು ನೀಡಿರುವ ಮಾನ್ಯತೆಯನ್ನು ಆಧರಿಸಿ, 2015-16ನೇ ಶೈಕ್ಷಣಿಕ ಸಾಲಿನಿಂದ ಸದರಿ ಕಾಲೇಜಿಗೆ ಸಂಯೋಜನೆ ಮಂಜೂರು ಮಾಡುವ ವಿಚಾರವನ್ನು ಆಧರಿಸಿ ಸಂವೀಕ್ಷಿಸಲಾಗಿದೆ.

2) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ (11)ನೇ ಉಪಪ್ರಕರಣದಡಿ ಹಾಗೂ ಸದರಿ ಅಧಿನಿಯಮದ ಪ್ರಕರಣ 59(18)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ನೀವೀ ಎಜುಕೇಷನ್ ಟ್ರಸ್ಟ್, ಮಲ್ಲನಾಯಕನಹಳ್ಳಿ, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ - 577 530 ಇವರು ಶ್ರೀ ಮಾಲತೇಶ ಬಿ.ಇಡಿ., ಕಾಲೇಜು, ಮಲೇಬೆನ್ನೂರು, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ - 577 530 ಇಲ್ಲಿ ಹೊಸದಾಗಿ 100(ಒಂದು ನೂರು) ವಿದ್ಯಾರ್ಥಿ ಪ್ರಮಾಣದೊಂದಿಗೆ ಬಿ.ಇಡಿ. ಮಹಾವಿದ್ಯಾಲಯವನ್ನು 2015-16ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಲು ಸಂಯೋಜನೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರು ಮಾಡುವಂತೆ ಸರ್ಕಾರದ ಶಿಫಾರಸ್ಸನ್ನು ತಿಳಿಸಲು ನಿರ್ದೇಶಿತನಾಗಿದ್ದೇನೆ.

ಷರತ್ತುಗಳು:-

| | |
|---|---|
| 1. | ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು ಹಾಗೂ ಈ ಕುರಿತು ವಿಶ್ವವಿದ್ಯಾಲಯಕ್ಕೆ ಒಪ್ಪಂದದ ಪತ್ರವನ್ನು ಸಲ್ಲಿಸತಕ್ಕದ್ದು. |
| 2. | ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು; |
| 3. | ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ; |
| 4. | ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು; |
| 5. | ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. |
| 6. | ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. |

Scanned with CamScanner

| | |
|---|---|
| 7. | ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ. |
| 8. | ದಿನಾಂಕ: 13-8-1997 ರಂದು ವಿಶಾಖ V/S ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು; |
| 9. | ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು. |
| 10. | ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ; |
| 11. | ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ. |
| 12. | ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ. |
| 13. | ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು. |
| 14. | ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು |
| 15. | ಶಾಶ್ವತ ಅನುದಾನರಹಿತ ಷರತ್ತಿ ಒಳಪಡಲು ಕಾಲೇಜಿನಿಂದ ಮಧ್ಯಂತರ ಒಪ್ಪಂದದ ಪತ್ರವನ್ನು ಮತ್ತು ಗೊತ್ತುವಳಿಯನ್ನು ವಿಶ್ವವಿದ್ಯಾಲಯವು ಪಡೆಯತಕ್ಕದ್ದು ಹಾಗೂ ವಿದ್ಯಾಸಂಸ್ಥೆಯು ಒಪ್ಪಂಧದಲ್ಲಿನ ನಿಬಂಧನೆಗಳನ್ನು ಕಟ್ಟು-ನಿಟ್ಟಾಗಿ ಪಾಲಿಸತಕ್ಕದ್ದು. |
| 16. | ದಾವಣಗೆರೆ ವಿಶ್ವವಿದ್ಯಾಲಯ ಹಾಗೂ ಎನ್‌ಸಿಟಿಇಯು ವಿಧಿಸುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. |
| 17. | ಸದರಿ ಮಹಾವಿದ್ಯಾಲಯದ ಕಟ್ಟಡ, ಶೌಚಾಲಯ ಮತ್ತು ಗ್ರಂಥಾಲಯ ವ್ಯವಸ್ಥೆಯನ್ನು ಉತ್ತಮಪಡಿಸಿಕೊಳ್ಳತಕ್ಕದ್ದು ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯ ನೇಮಕಾತಿ ಪ್ರಕ್ರಿಯೆಯನ್ನು ಆದಷ್ಟು ಬೇಗ ಪೂರ್ಣಗೊಳಿಸತಕ್ಕದ್ದು. |

ತಮ್ಮ ನಂಬುಗೆಯ,

(ಎನ್. ವೀರಬ್ರಹ್ಮಚಾರಿ) 3/3

ಸರ್ಕಾರದ ಅಧೀನ ಕಾರ್ಯದರ್ಶಿ,

ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು).

5/3/16

ಪ್ರತಿ:-

1. ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು - 560 001.
2. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಶಿವಮೊಗ್ಗ..
3. ಪ್ರಾದೇಶಿಕ ಜಂಟಿ ನಿರ್ದೇಶಕರು, ದಕ್ಷಿಣ ಪ್ರಾಂತೀಯ ಸಮಿತಿ, ನ್ಯಾಷನಲ್ ಕೌನ್ಸಿಲ್ ಫಾರ್ ಟೀಚರ್ಸ್ ಎಜುಕೇಷನ್, ಜ್ಞಾನ ಭಾರತಿ ಕ್ಯಾಂಪಸ್ ರಸ್ತೆ, ನಾಗರಬಾವಿ, ನ್ಯಾಷನಲ್ ಲಾ ಸ್ಕೂಲ್ ಎದುರು, ಬೆಂಗಳೂರು – 560 062.
4. ವಿಶೇಷಾಧಿಕಾರಿಗಳು, ಕೇಂದ್ರೀಕೃತ ದಾಖಲಾತಿ ಘಟಕ, ಕಾವೇರಿ ಭವನದ ಎದುರು, ಬೆಂಗಳೂರು –09.
5. ಮ್ಯಾನೇಜಿಂಗ್ ಟ್ರಸ್ಟಿ, ನೀವೀ ಎಜುಕೇಷನ್ ಟ್ರಸ್ಟ್, ಮಲ್ಲನಾಯಕನಹಳ್ಳಿ, ಮಲೇಬೆನ್ನೂರು, ಹರಿಹರ ತಾಲ್ಲೂಕು. ದಾವಣಗೆರೆ ಜಿಲ್ಲೆ.
6. ಪ್ರಾಂಶುಪಾಲರು, ಶ್ರೀ ಮಾಲತೇಶ ಬಿ.ಇಡಿ ಕಾಲೇಜು, ಮಲೇಬೆನ್ನೂರು, ಹರಿಹರ ತಾಲ್ಲೂಕು, ದಾವಣಗೆರೆ ಜಿಲ್ಲೆ.
7. ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

Scanned with CamScanner